ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಶಾಸಕಾಂಗ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 01/08/2019

# ಹೈಗೆ ಗುಂಡೂರಾವ್ ಕೇವಿಯಟ್ ಅರ್ಜಿ

**ಬೆಂಗಳೂರು:** ಅನರ್ಹ ಶಾಸಕರು ಸ್ಪೀಕರ್ ಆದೇಶ ಪ್ರಶ್ನಿಸಿ ಅರ್ಜಿ ಸಲ್ಲಿಸಿದರೆ, ಯಾವುದೇ ಮಧ್ಯಂತರ ಆದೇಶ ಮಾಡುವ ಮುನ್ನ ತಮ್ಮ ವಾದವನ್ನು ಪರಿಗಣಿಸಬೇಕು ಎಂದು ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಹೈಕೋರ್ಟ್‌ಗೆ ಕೇವಿಯಟ್ ಸಲ್ಲಿಸಿದ್ದಾರೆ.

2019ರ ಜುಲೈನಲ್ಲಿ ಕಾಂಗ್ರೆಸ್‌ನ ಎಂಟು ಮಂದಿ ಶಾಸಕರನ್ನು ಅನರ್ಹಗೊಳಿಸಿ ಸ್ಪೀಕರ್ ಆಗಿದ್ದ ಕೆ.ಆರ್.ರಮೇಶ್ ಕುಮಾರ್ ಅವರು ಆದೇಶ ಹೊರಡಿಸಿದ್ದಾರೆ. ಈ ಆದೇಶ ಪ್ರಶ್ನಿಸಿ ಅನರ್ಹಗೊಂಡ ಎಂಟು ಮಂದಿ ಶಾಸಕರು ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸುವ ಸಾಧ್ಯತೆ ಇದೆ. ಹೀಗಾಗಿ, ಒಂದು ವೇಳೆ ಅರ್ಜಿ ಸಲ್ಲಿಕೆಯಾದರೆ, ಆ ಅರ್ಜಿಗಳ ಸಂಬಂಧ ಯಾವುದೇ ಮಧ್ಯಂತರ ಆದೇಶ ಹೊರಡಿಸುವ ಮುನ್ನ ತಮಗೆ ನೋಟಿಸ್ ಜಾರಿಗೊಳಿಸಿ ತಮಗೂ ವಾದ ಮಂಡಿಸಲು ಅವಕಾಶ ಕಲ್ಪಿಸಬೇಕು. ಒಂದುವೇಳೆ ತಮ್ಮ ವಾದ ಆಲಿಸದೇ ಏಕಪಕ್ಷೀಯ ಮಧ್ಯಂತರ ಆದೇಶ ನೀಡಿದ್ದಲ್ಲಿ, ತಮಗೆ ಸಾಕಷ್ಟು ಅನಾನುಕೂಲವಾಗಲಿದೆ ಎಂದು ಅರ್ಜಿಯಲ್ಲಿ ಮನವಿ ಮಾಡಲಾಗಿದೆ.

ಅರ್ಜಿಯಲ್ಲಿ ಅನರ್ಹಗೊಂಡಿರುವ ಶಾಸಕರಾದ ಪ್ರತಾಪ್ ಗೌಡ ಪಾಟೀಲ್, ಬಿ.ಸಿ. ಪಾಟೀಲ್, ಶಿವರಾಮ್ ಹೆಬ್ಬಾರ್, ಎಸ್.ಟಿ. ಸೋಮಶೇಖರ್, ಭೈರತಿ ಬಸವರಾಜು, ಆನಂದ್ ಸಿಂಗ್, ರೋಷನ್ ಬೇಗ್ ಹಾಗೂ ಮುನಿರತ್ನ ಅವರನ್ನು ಪ್ರತಿವಾದಿಯನ್ನಾಗಿ ಮಾಡಲಾಗಿದೆ.